ಕರ್ನಾಟಕ ಸರ್ಕಾರ

# ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು

ಸಂ. ಗಣಕಶಾಖೆ/ಎಸ್.ಎಸ್.ಎಲ್.ಸಿ/ನೋಂದಣಿ/01/2018-19 ದಿನಾಂಕ 28/09/2018

## - ಸುತ್ತೋಲೆ -

ವಿಷಯ : ಏಪ್ರಿಲ್-2019 ರ ಎಸ್.ಎಸ್.ಎಲ್.ಸಿ ಪರೀಕ್ಷೆಯ ವಿದ್ಯಾರ್ಥಿಗಳ ನೋಂದಣಿ ಮಾಹಿತಿಗಳನ್ನು ಎಸ್.ಎ.ಟಿ.ಎಸ್ ಜಾಲತಾಣದಲ್ಲಿ ಅಪ್‌ಲೋಡ್ ಮಾಡುವ ಬಗ್ಗೆ.

ಉಲ್ಲೇಖ : 1) ಮಾನ್ಯ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರ ಅಧ್ಯಕ್ಷತೆಯಲ್ಲಿ ನಡೆದ ಸಭಾ ನಡಾವಳಿಗಳ ದಿನಾಂಕ:20.08.2018

2) ಈ ಕಛೇರಿಯ ಅಧಿಸೂಚನೆ ಸಂ. ಎ8/ಎಸ್.ಎಸ್.ಎಲ್.ಸಿ.ಅಧಿಸೂಚನೆ/ಏಪ್ರಿಲ್-2019/21/2018-19 ದಿನಾಂಕ 20/09/2018

ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯ ಎಸ್.ಎಸ್.ಎಲ್.ಸಿ ಏಪ್ರಿಲ್-2019ರ ಪರೀಕ್ಷೆಗೆ ಅರ್ಹ ಅಭ್ಯರ್ಥಿಗಳ ನೋಂದಣಿ ಕಾರ್ಯವನ್ನು SATS ಜಾಲತಾಣದಲ್ಲಿ ಆನ್‌ಲೈನ್‌ನಲ್ಲಿ ಪಡೆಯಲು ಯೋಜಿಸಲಾಗಿದೆ. ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಮಾನ್ಯತೆ ಪಡೆದಿರುವ ಖಾಸಗಿ ಅನುದಾನಿತ ಹಾಗೂ ಅನುದಾನ ರಹಿತ ಶಾಲೆಗಳ ಮುಖ್ಯಸ್ಥರು ತಮ್ಮ ಶಾಲೆಯ (ಶಾಲಾ ಅಭ್ಯರ್ಥಿ, ಖಾಸಗಿ ಅಭ್ಯರ್ಥಿ, ಪುನರಾವರ್ತಿತ ಶಾಲಾ ಹಾಗೂ ಖಾಸಗಿ ಅಭ್ಯರ್ಥಿಗಳು) ಏಪ್ರಿಲ್ -2019 ರ ಎಸ್.ಎಸ್.ಎಲ್.ಸಿ ಪರೀಕ್ಷೆಯನ್ನು ತೆಗೆದುಕೊಳ್ಳುವ ವಿದ್ಯಾರ್ಥಿಗಳ ವಿವರಗಳನ್ನು ಆನ್‌ಲೈನ್ ಮೂಲಕ ಅಪ್‌ಲೋಡ್ ಮಾಡುವಂತೆ ಈ ಮೂಲಕ ಆದೇಶಿಸಿದೆ.

1) ಮಾಹಿತಿಗಳನ್ನು ಅಪ್ ಲೋಡ್ ಮಾಡಲು ಬಳಸಬೇಕಾದ ಫಾರಂ ನ್ನು sts.karnataka.gov.in, ಅಥವಾ http://www.kseeb.kar.nic.in ಜಾಲತಾಣಗಳ ಮೂಲಕ ತಲುಪಬಹುದಾಗಿದೆ.
2) ಮುಖ್ಯಶಿಕ್ಷಕರಿಗೆ ಎಸ್.ಎ.ಟಿ.ಎಸ್ ವತಿಯಿಂದ ಈಗಾಗಲೇ ನೀಡಿರುವ username and password ಬಳಸಿ ಆನ್ ಲೈನ್ ನೋಂದಣಿ ಕಾರ್ಯ ಮಾಡಬಹುದಾಗಿದೆ.
3) ಏಪ್ರಿಲ್-2019ರ ಪರೀಕ್ಷೆಗೆ SATS ಜಾಲತಾಣದಲ್ಲಿ ಕೆಳಕಂಡ ಅಭ್ಯರ್ಥಿಗಳನ್ನು ನೋಂದಾಯಿಸಬೇಕಾಗಿರುತ್ತದೆ.
   - ಶಾಲಾ ವಿದ್ಯಾರ್ಥಿಗಳ(CCERF)-ಪೂರ್ಣ ಮಾಹಿತಿ ಹಾಗೂ ಭಾವಚಿತ್ರ ಮತ್ತು ಸಹಿಯನ್ನು ಅಪ್ ಲೋಡ್ ಮಾಡಬೇಕು.
   - ಖಾಸಗಿ ಅಭ್ಯರ್ಥಿಗಳು(CCEPF)-ಪೂರ್ಣ ಮಾಹಿತಿ ಹಾಗೂ ಭಾವಚಿತ್ರ ಮತ್ತು ಸಹಿಯನ್ನು ಅಪ್ ಲೋಡ್ ಮಾಡಬೇಕು.
   - 2003 ರಿಂದ 2018ರವರೆಗಿನ ಪುನರಾವರ್ತಿತ ಶಾಲಾ ಅಭ್ಯರ್ಥಿಗಳ ಹಾಗು ಪುನರಾವರ್ತಿತ ಖಾಸಗಿ ಅಭ್ಯರ್ಥಿಗಳು (CCERR CCEPR)-ನೋಂದಣಿ ಸಂಖ್ಯೆಯನ್ನು ನಮೂದಿಸಿದರೆ ಡೇಟಾ Fetch ಆಗುತ್ತದೆ ಹಾಗೂ ಭಾವಚಿತ್ರ ಮತ್ತು ಸಹಿಯನ್ನು ಅಪ್ ಲೋಡ್ ಮಾಡಬೇಕು.
   - 2002 ಮತ್ತು ಅದಕ್ಕಿಂತ ಹಿಂದಿನ ವರ್ಷಗಳಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಅನುತ್ತೀರ್ಣರಾದ NSR ಮತ್ತು NSPR ಪುನರಾವರ್ತಿತ ಅಭ್ಯರ್ಥಿಗಳ ವಿವರಗಳನ್ನು ಶಾಲೆಯಲ್ಲಿ ಲಭ್ಯವಿರುವ ಎಂಎಸ್‌ಎ ಹಾಗೂ ಶಾಲೆಯಲ್ಲಿ ಲಭ್ಯವಿಲ್ಲದಿದ್ದಲ್ಲಿ ಸಂಬಂಧಿಸಿದ ವಿಭಾಗೀಯ ಕಛೇರಿಯಿಂದ ದ್ವಿತೀಯ ಪ್ರತಿ ಎಂಎಸ್‌ಎಯನ್ನು ಪಡೆದು ಅದರಲ್ಲಿರುವಂತೆ ಮಾಹಿತಿಯನ್ನು SATS ಜಾಲತಾಣದಲ್ಲಿ ದಾಖಲಿಸುವುದು.-ಪೂರ್ಣ ಮಾಹಿತಿ ಹಾಗೂ ಭಾವಚಿತ್ರ ಮತ್ತು ಸಹಿಯನ್ನು ಅಪ್ ಲೋಡ್ ಮಾಡಬೇಕು ಮತ್ತು ಭೌತಿಕವಾಗಿ ಅರ್ಜಿಯನ್ನು ಮಂಡಳಿಗೆ ರವಾನಿಸಬೇಕು.

4) ದಿನಾಂಕ 01/10/2018 ರಿಂದ ದಿನಾಂಕ 20/10/2018 ರ ವರೆಗೆ ಮಾಹಿತಿಯನ್ನು ಅಪ್ ಲೋಡ್ ಮಾಡಲು ಕಾಲಾವಧಿಯನ್ನು ನಿಗಧಿಪಡಿಸಲಾಗಿದೆ.

5) ಎಸ್.ಎಸ್.ಎಲ್.ಸಿ ಪರೀಕ್ಷೆಗೆ ಸಂಬಂಧಿಸಿದ ವಿದ್ಯಾರ್ಥಿಯ ಬಹುತೇಕ ಮಾಹಿತಿಗಳನ್ನು ಎಸ್.ಎ.ಟಿ.ಎಸ್ ಡೇಟಾಬೇಸ್ ನಿಂದ ಪಡೆಯುತ್ತಿರುವುದರಿಂದ ಈಗಿರುವ ಮಾಹಿತಿಗಳಲ್ಲಿ ಇರಬಹುದಾದ ತಪ್ಪುಗಳನ್ನು ಸರಿಪಡಿಸಿ ನಂತರ ಪರೀಕ್ಷಾ ನೋಂದಣಿ ಫಾರಂ ಭರ್ತಿ ಮಾಡುವುದು.

6) ಆನ್ ಲೈನ್ ಡೇಟಾ ಎಂಟ್ರಿ ಪ್ರಾರಂಭಿಸುವ ಮೊದಲು ಶಾಲೆಯ ಪ್ರತಿ ವಿದ್ಯಾರ್ಥಿಯ ಭಾವಚಿತ್ರ (25–30ಕೆಬಿ) ಹಾಗು ಸಹಿಯನ್ನು (10–15ಕೆಬಿ) ಸ್ಕ್ಯಾನ್ ಮಾಡಿ ಅವರ ಎಸ್.ಎ.ಟಿ.ಎಸ್. ನೋಂದಣಿ ಸಂಖ್ಯೆಯಂತೆ ಸೇವ್ ಮಾಡಿಟ್ಟುಕೊಳ್ಳುವುದು.(jpg, jpeg or png form)

7) ಆನ್ ಲೈನ್ ಡೇಟಾ ಎಂಟ್ರಿ ಕಾರ್ಯಕ್ಕಾಗಿ, ಈ ವರ್ಷ ಪ್ರತಿ ವಿದ್ಯಾರ್ಥಿಗೆ ರೂ. 20/– ರಂತೆ ಮಂಜೂರು ಮಾಡಲಾಗಿದೆ. ಶಾಲೆಯಿಂದ ಮಂಡಳಿಗೆ ಪಾವತಿಸುವ ವಿದ್ಯಾರ್ಥಿಗಳ ಒಟ್ಟು ಶುಲ್ಕದಲ್ಲಿ ಪ್ರತಿ ವಿದ್ಯಾರ್ಥಿಗೆ ರೂ. 20/–ರಂತೆ ಕಟಾಯಿಸಿ ಉಳಿದ ಶುಲ್ಕವನ್ನು ಮಂಡಳಿಗೆ ಪಾವತಿಸಬೇಕಾಗಿರುತ್ತದೆ.

8) ಮುಖ್ಯಶಿಕ್ಷಕರು ಆನ್‌ಲೈನ್‌ನಲ್ಲಿ ಎಲ್ಲಾ ವಿದ್ಯಾರ್ಥಿಗಳ ಮಾಹಿತಿ ಗಣಕೀಕರಿಸಿದ ಮೇಲೆ ವಿದ್ಯಾರ್ಥಿಗಳ ಶುಲ್ಕವನ್ನು ಮಂಡಳಿಗೆ ಪಾವತಿಸಲು ಚಲನ್‌ನ್ನು SATS ಜಾಲತಾಣದಲ್ಲಿ ಡೌನ್ ಲೋಡ್ ಮಾಡಿಕೊಳ್ಳುವುದು.

9) ಪ್ರಸ್ತುತ ಆನ್‌ಲೈನ್ ಮೂಲಕ ಭರ್ತಿ ಮಾಡಲಾದ ವಿದ್ಯಾರ್ಥಿಗಳ ವಿವರಗಳು ಅಂಕಪಟ್ಟಿ ಹಾಗು ವರ್ಗಾವಣೆ ಪತ್ರಗಳಲ್ಲಿ ನಮೂದಾಗುವುದರಿಂದ ಯಾವುದೇ ತಪ್ಪುಗಳು ಆಗದಂತೆ ಎಚ್ಚರಿಕೆ ವಹಿಸಲು ಸೂಚಿಸಿದೆ. ನಿಗದಿತ ದಿನಾಂಕದ ನಂತರ ತಾವುಗಳು ನೀಡುವ ಮಾಹಿತಿಗಳನ್ನು ಫ್ರೀಜ್ ಮಾಡುವುದರಿಂದ ನಂತರ ವಿದ್ಯಾರ್ಥಿಗಳ ವಿವರಗಳಲ್ಲಿ ಯಾವುದೇ ಬದಲಾವಣೆ ಮಾಡಲು ಅವಕಾಶ ನೀಡಲಾಗುವುದಿಲ್ಲ.

ಮುಖ್ಯಶಿಕ್ಷಕರಿಗೆ ಎಸ್.ಎ.ಟಿ.ಎಸ್ ವತಿಯಿಂದ ಈಗಾಗಲೇ ನೀಡಿರುವ username and password ನ್ನು ಗೌಪ್ಯವಾಗಿಟ್ಟುಕೊಳ್ಳುವುದು.

HELPLINE - 08023310075
080 23310076

(ಸುಮಂಗಲ. ವಿ) 28/9/18
ನಿರ್ದೇಶಕರು (ಪರೀಕ್ಷೆಗಳು)

ಅಗತ್ಯ ಕ್ರಮಕ್ಕಾಗಿ :

1) ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ಇವರುಗಳಿಗೆ
2) ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ
3) ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಹಾಗು ಮಾನ್ಯತೆ ಪಡೆದಿರುವ ಖಾಸಗಿ ಅನುದಾನರಹಿತ ಪ್ರೌಢಶಾಲೆಗಳ ಮುಖ್ಯಸ್ಥರಿಗೆ

ಪ್ರತಿಗಳನ್ನು

1. ಮಾನ್ಯ ಮುಖ್ಯ ಕಾರ್ಯದರ್ಶಿಗಳು, ಪ್ರಾಥಮಿಕ ಹಾಗು ಪ್ರೌಢಶಿಕ್ಷಣ, ಬಹುಮಹಡಿಗಳ ಕಟ್ಟಡ, ಬೆಂಗಳೂರು
2. ಮಾನ್ಯ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ
3. ಮಾನ್ಯ ರಾಜ್ಯ ಯೋಜನಾ ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ/ರಾಷ್ಟ್ರೀಯ ಮಾಧ್ಯಮಿಕ ಅಭಿಯಾನ, ಬೆಂಗಳೂರು
4. ಮಾನ್ಯ ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ
5. ಮಾನ್ಯ ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರ್ಗಿ
6. ನಿರ್ದೇಶಕರು, ಪ್ರೌಢಶಿಕ್ಷಣ, ಮಾನ್ಯ ಆಯುಕ್ತರ ಕಛೇರಿ.
7. ವಿಭಾಗೀಯ ಸಹನಿರ್ದೇಶಕರು, ಬೆಂಗಳೂರು, ಮೈಸೂರು, ಬೆಳಗಾಂ ಹಾಗು ಕಲಬುರ್ಗಿ ವಿಭಾಗಗಳು

ಇವರುಗಳಿಗೆ ಗೌರವಪೂರ್ವಕವಾಗಿ ಸಲ್ಲಿಸಿದೆ.